ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು)

ಅ) ಇಲ್ಲ.

ಆ) ಪುಲಕೇಶಿನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಮೋದಿ ಗಾರ್ಡ್‌ನ್ ಹಾಗೂ ಸಗಾಯಿಪುರ ಬಡಾವಣೆಯಲ್ಲಿ ಪೊಲೀಸ್ ಔಟ್ ಪೋಸ್ಟ್ ತೆರೆಯುವ ಬಗ್ಗೆ ಸಾರ್ವಜನಿಕ ರಿಂದ ಅಥವಾ ಸಂಘ ಸಂಸ್ಥೆಗಳಿಂದ ಬೇಡಿಕೆ ಬಂದಲ್ಲಿ ನಿಯಮಾನುಸಾರ ಪರಿಶೀಲಿಸಿ ಪೊಲೀಸ್ ಔಟ್ ಪೋಸ್ಟ್ ತೆರೆಯಲು ಪರಿಶೀಲಿಸಲಾಗುವುದು.

ಇ) ಅನ್ವಯಿಸುವುದಿಲ್ಲ.

ಅತ್ಯಾಚಾರ ಪ್ರಕರಣಗಳು

8(122); ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ)

ಅ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ನಡೆದ ಅತ್ಯಾಚಾರ ಪ್ರಕರಣಗಳೆಷ್ಟು;

ಆ) ಅತ್ಯಾಚಾರ ನಡೆಸಿ ತಲೆಮರೆಸಿ ಕೊಂಡಿರುವ ಅತ್ಯಾಚಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕಾನೂನು ಕ್ರಮಗಳೇನು:

ಇ) ಹೆಣ್ಣು ಮಕ್ಕಳ ಮೇಲೆ ದೌರ್ಜನ್ಯ, ಅತ್ಯಾಚಾರವನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಈ) ಅತ್ಯಾಚಾರಕ್ಕೊಳಗಾಗಿ ಮಾನಸಿಕ ಹಿಂಸೆ ಅನುಭವಿಸುತ್ತಿರುವ ಹೆಣ್ಣು ಮಕ್ಕಳಿಗೆ ಸರ್ಕಾರದ ವತಿಯಿಂದ ಪರಿಹಾರವಿದೆಯೇ; (ಸಂಪೂರ್ಣ ವಿವರ ನೀಡುವುದು)

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ನಡೆದ ಅತ್ಯಾಚಾರ ಪ್ರಕರಣಗಳ ಸಂಖ್ಯೆ ಈ ಕೆಳಗಿನಂತಿದೆ.

ವರ್ಷ	ಅತ್ಯಾಚಾರ ಪ್ರಕರಣಗಳು
2011	636
2012	621
2013	1030
2014 (ಅಕ್ಟೋಬರ್‌ವರೆಗೆ)	1035

ಆ) ಅತ್ಯಾಚಾರ ನಡೆಸಿ ತಲೆ ಮರೆಸಿಕೊಂಡಿರುವ ಅತ್ಯಾಚಾರಿಗಳ ವಿರುದ್ಧ ಸರ್ಕಾರವು ಪತ್ತೆಗಾಗಿ ದೃಶ್ಯ ಮಾಧ್ಯಮ, ಪತ್ರಿಕಾ ಮಾಧ್ಯಮದ ಮೂಲಕ ಪ್ರಕಟಣೆ ಹೊರಡಿಸಿ ಮತ್ತು ಮೊಬೈಲ್ ಟ್ರ್ಯಾಕ್ ಮೂಲಕ ಅವರನ್ನು ಪತ್ತೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಅತ್ಯಾಚಾರವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು.

- ನಗರ/ಜಿಲ್ಲೆಗಳಲ್ಲಿ ಎಸ್‌ಜೆಪಿಯು (Special Juvenile Police Units) ಘಟಕವನ್ನು ಸ್ಥಾಪಿಸಿ, ಹಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನೇಮಿಸಿ, ಸರ್ಕಾರವು ಸಂಖ್ಯೆ: ಹೆಚ್‌ಡಿ 393 ಪಿಸಿಸಿ 2011 ರಂತೆ ಆದೇಶ ಹೊರಡಿಸಿರುತ್ತದೆ. ಮಕ್ಕಳ ಮೇಲಿನ ಲೈಗಿಂಕ ಕಿರುಕುಳ ಪ್ರಕರಣಗಳನ್ನು ತಡೆಗಟ್ಟಲು Protection of Children from Sexual Offences, 2012 ಕಾಯ್ದೆ ಜಾರಿಗೆ ಬಂದಿದ್ದು, ಸದರಿ ಕಾಯ್ದೆ ಅನ್ವಯ ಕ್ರಮ ಜರುಗಿಸಲಾಗುತ್ತಿದೆ.
- ಅತ್ಯಾಚಾರ ಪ್ರಕರಣಗಳನ್ನು ಗೂಂಡಾ ಕಾಯ್ದೆಯಡಿ ವಿಚಾರಣೆಗೆ ಒಳಪಡಿಸಲು ಕಾನೂನಿಗೆ ತಿದ್ದುಪಡಿ ತರಲಾಗಿದೆ.
- ಎಲ್ಲ ಶೈಕ್ಷಣಿಕ ಸಂಸ್ಥೆಗಳ, ಶಾಳಾ ಕಾಲೇಜುಗಳ, ಮುಖ್ಯಸ್ಥರನ್ನು ಭೇಟಿ ಮಾಡಿ ವಿಧ್ಯಾರ್ಥಿನಿಯರಿಗೆ ಕಿರುಕುಳ, ಅತ್ಯಾಚಾರದಂತಹ ಘಟನೆಗಳ ಬಗ್ಗೆ ಜಾಗೃತಿ ಮೂಡಿಸುವ ಕುರಿತು ಆಗಾಗ

ಸಭೆಗಳನ್ನು ಆಯೋಜಿಸುವಂತೆ ಸೂಚಿಸಲಾಗಿದೆ ಮತ್ತು ಗ್ರಾಮ ಸಭೆಗಳು, ಸಾರ್ವಜನಿಕ ಸಭೆಗಳಲ್ಲಿಯೂ ಸಹ ಈ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.

- ವಿದ್ಯಾರ್ಥಿನಿಯರು ಇರುವ ಹಾಸ್ಟೆಲ್‌ಗಳ ಕಡೆಗೆ ಹಾಗೂ ಜನವಸತಿ ಪ್ರದೇಶಗಳಲ್ಲಿ ವಿಶೇಷ ಗಸ್ತು ನೇಮಿಸಿ ಮಹಿಳಾ ಸಿಬ್ಬಂದಿಯವರು ಮೇಲಿಂದ ಮೇಲೆ ಭೇಟಿ ಕೊಡುವಂತೆ ನೋಡಿಕೊಳ್ಳಲಾಗಿದೆ. ಮಹಿಳಾ ಮತ್ತು ಮಕ್ಕಳ ಸುರಕ್ಷತೆಗಾಗಿ ವಿಶೇಷವಾಗಿ 'ಅಭಯ' ಗಸ್ತು ವಾಹನ ಪ್ರಾರಂಭಿಸಲಾಗಿದೆ.

- ಮಹಿಳಾ ಮತ್ತು ಮಕ್ಕಳ ಸಹಾಯವಾಣಿ ಕೇಂದ್ರಗಳನ್ನು ತೆರೆಯಲಾಗಿದೆ.

- ಸರ್ಕಾರದ ಆದೇಶದ ಸಂಖ್ಯೆ : ಮಮಇ/70/ಮಮಅ/2014, ದಿ. 12/6/2014 ರಲ್ಲಿ, ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ರಾಜ್ಯದ ಎಲ್ಲಾ 30 ಜಿಲ್ಲಾ ಆಸ್ಪತ್ರೆಗಳಲ್ಲಿ ಹಾಗೂ ಬೆಂಗಳೂರು ನಗರದ ಬೌರಿಂಗ್ ಆಸ್ಪತ್ರೆ, ಕೆಸಿ ಜನರಲ್ ಆಸ್ಪತ್ರೆ, ವೈದ್ಯಕೀಯ ಮಹಾವಿದ್ಯಾಲಯ, ನಿಮ್ಹಾನ್ಸ್ ಮತ್ತು ಜಯದೇವ ಹೃದ್ರೋಗ ಆಸ್ಪತ್ರೆಗಳಲ್ಲಿ "ಮಹಿಳಾ ವಿಶೇಷ ಚಿಕಿತ್ಸಾ ಘಟಕ" ಗಳನ್ನು ಸ್ಥಾಪಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ಸದರಿ ಆದೇಶವನ್ನು ಅನುಷ್ಠಾನಗೊಳಿಸಲು ಇಲಾಖಾ ವತಿಯಿಂದ ಸಹಕಾರವನ್ನು ನೀಡಲಾಗುವುದು.

ಈ) ಅತ್ಯಾಚರಕ್ಕೆ ಒಳಗಾಗಿ ನೊಂದವರಿಗೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ. 1 ಪಿಸಿಬಿ 2011. ದಿನಾಂಕ:19–9–2013 ರಲ್ಲಿರುವಂತೆ ಪರಿಹಾರ ಧನ ವಿತರಿಸಲಾಗುತ್ತಿದೆ. (ಆದೇಶದ ಪ್ರತಿ ಒದಗಿಸಲಾಗಿದೆ)